**ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು, ದಿನಾಂಕ:03.03.2026.**

**ಮುಖ್ಯ ವಿಚಾರಣೆ:-ವಾದಿ ಪರ ಶ್ರೀ.A.K.P., ವಕೀಲರಿಂದ:-**

ನಾನು ನನ್ನ ಮೌಖಿಕ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದನ್ನು ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಈಗ ನೋಡುತ್ತಿರುವ ಕೆನರಾ ಬ್ಯಾಂಕ್ ಚೆಕ್ ಅನ್ನುಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು ಗುರುತಿಸಲಾಯಿತು ಮತ್ತು ಅದರಲ್ಲಿರುವ ಪ್ರತಿವಾದಿ 1 ರವರ ಗಂಡ ರಾಘವೇಂದ್ರ ಶೆಟ್ಟಿಯವರ ಸಹಿಯನ್ನು ಗುರುತಿಸಿದ್ದು ಸದರಿ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಕರ್ನಾಟಕ ಗ್ರಾಮೀಣ ಬ್ಯಾಂಕ್, ಇವರು ನೀಡಿದ ಮೆಮೋವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.2 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ನಾನು ಪ್ರತಿವಾದಿಗಳಿಗೆ ನೀಡಿದ ಲೀಗಲ್ ನೋಟೀಸ್ ದಿ:23.09.2024 ಮತ್ತು ದಿ:14.10.2024 ನೇದರ ಕಛೇರಿ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.3 ಮತ್ತು 4 ಎಂದು ಗುರುತಿಸಲಾಯಿತು ಮತ್ತು ಅದಕ್ಕೆ ಸಂಬಂದಪಟ್ಟ 6 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 5 ರಿಂದ 10 ಎಂದು ಗುರುತಿಸಲಾಯಿತು. ಅವುಗಳಿಗೆ ಸಂಬಂದಿಸಿದ ವಾಪಾಸಾದ 6 ಅಂಚೆ ಲಕೋಟೆಗಳನ್ನು ತೆರೆದ ನ್ಯಾಯಲಯದಲ್ಲಿ ತಗೆದು ನೋಡಲಾಗಿ ಅದರೊಳಗಿದ್ದ ನೋಟೀಸ್ ಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.11 ರಿಂದ 16 ಮತ್ತು 11(ಎ) ರಿಂದ 16 (ಎ) ಎಂದು ಗುರುತಿಸಲಾಯಿತು.

ದಾವೆಯಲ್ಲಿ ಕೇಳಿದಂತೆ ಆದೇಶ ಮಾಡಲು ಕೋರಿಕೊಳ್ಳುತ್ತೇನೆ.

**<u>ಪಾಟೀ ಸವಾಲು:</u> ಪ್ರತಿವಾದಿ ಪರ ವಕೀಲರಿಂದ:-**

**(**ಈ ಹಂತದಲ್ಲಿ ಪ್ರತಿವಾದಿ ಏಕಪಕ್ಷವಾಗಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು**)**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸರಿ ಇದೆ**

**ಸಹಿ/-**
**ಸಿವಿಲ್ ನ್ಯಾಯಾಧೀಶರು, ಜಗಳೂರು**